ಜಿಲ್ಲಾಧಿಕಾರಿಗಳ ಕಾರ್ಯಾಲಯ,
(ಜಿಲ್ಲಾ ನಗರಾಭಿವೃದ್ಧಿ ಕೋಶ)
ಕೊಠಡಿ ಸಂ:123, ಜಿಲ್ಲಾಡಳಿತ ಭವನ.
ಗದಗ-582101
ದೂ ಸಂ:08372-231877 (ಫ್ಯಾ)
ಇ-ಮೇಲ್: : ka.gadag.dudc@gmail.com

ಪೌರಾಡಳಿತ ಇಲಾಖೆ

Office of the Deputy Commissioner,
(District Urban Development Cell),
Room No: 123
Dist Administrative Buld.
Gadag- 582101
Tel No: 08372-231877 (F)
E-mail:ka.gadag.dudc@gmail.com

ನಂ:ಜಿನಕೋ/ಸಿಬ್ಬಂದಿ/ವಹಿ-14/2026-27 ದಿನಾಂಕ: 29 /08/2026

- : ಅಧಿಸೂಚನೆ : -

ವಿಷಯ: ರಾಜ್ಯದ ಮಹಾನಗರ ಪಾಲಿಕೆ/ ನಗರಸಭೆಗಳಲ್ಲಿ ನೇರಪಾವತಿ ಅಡಿಯಲ್ಲಿ ಖಾಲಿ ಇರುವ ಪೌರಕಾರ್ಮಿಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ/108/ಜಿಇಎಲ್/2021(2) ದಿನಾಂಕಃ07-08-2025.
2. ಮಾನ್ಯ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ಬೆಂಗಳೂರು ರವರ ಸುತ್ತೋಲೆ ಸಂಖ್ಯೆಃ513641/DMA/EST2/OTH/08/2021 ದಿನಾಂಕಃ18-11-2025 & 20-11-2025

- * - * - * -

ರಾಜ್ಯದ ಮಹಾನಗರ ಪಾಲಿಕೆ/ ನಗರಸಭೆಗಳಲ್ಲಿ ನೇರಪಾವತಿ ಅಡಿಯಲ್ಲಿ ಖಾಲಿ ಇರುವ ಈ ಕೆಳಗಿನಂತೆ ನೇರಪಾವತಿ ಪೌರಕಾರ್ಮಿಕರ ಹುದ್ದೆಗಳನ್ನು ಭರ್ತಿ ಮಾಡಲು ಉಲ್ಲೇಖ (1) ಮತ್ತು (2) ರ ಆದೇಶಗಳಂತೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

1. ಅಭ್ಯರ್ಥಿಗಳು ಪ್ರತಿ ಹುದ್ದೆಗೆ ಪ್ರತ್ಯೇಕ ಅರ್ಜಿಯನ್ನು ಸಲ್ಲಿಸತಕ್ಕದ್ದು.
2. ಅಭ್ಯರ್ಥಿಗಳು ಅರ್ಜಿಯಲ್ಲಿ ಕೋರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಅಧಿಸೂಚನೆಯ ಅನುಬಂಧದಲ್ಲಿರುವ ನಮೂನೆಗಳಲ್ಲಿಯೇ ಕಡ್ಡಾಯವಾಗಿ ಪಡೆದಿಟ್ಟು ಕೊಂಡಿರತಕ್ಕದ್ದು.
3. ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸುವ ಕಾಲಮಿತಿ

ವಿವರ	ದಿನಾಂಕಃ	ಅರ್ಜಿ ನಮೂನೆ ಪಡೆಯುವ ವಿಳಾಸ
ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಪ್ರಾರಂಭಿಕ ದಿನಾಂಕಃ	29 -08-2026	1) ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಾರ್ಯಾಲಯ, ಕೊಠಡಿ ಸಂ.123, ಗದಗ 2) ನಗರಸಭೆ ಗದಗ ಬೆಟಗೇರಿ
ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ	30 -09-2026	

ಅ. ನಂ	ನಗರ ಸ್ಥಳೀಯ ಸಂಸ್ಥೆಗಳ ಹೆಸರು	2024ಕ್ಕೆ ಇರುವಂತೆ ಜನ ಸಂಖ್ಯೆ	700 ಜನ ಸಂಖ್ಯೆಗೆ ಒಬ್ಬರಂತೆ ನಿಗದಿ ಪಡಿಸಬಹುದಾದ ಪೌರಕಾರ್ಮಿಕರ ಹುದ್ದೆಗಳ ಸಂಖ್ಯೆ	ಶೇ.50 ರಷ್ಟು ಖಾಯಂ ಹುದ್ದೆಗಳು	ಶೇ.50 ರಷ್ಟು ನೇರಪಾವತಿ ಹುದ್ದೆಗಳು	ಹಾಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಪೌರಕಾರ್ಮಿಕರ ಸಂಖ್ಯೆ	ಹಾಲಿ ಕಾರ್ಯನಿರ್ವಹಿಸುತ್ತಿರುವ ನೇರ ಪಾವತಿ ಪೌರಕಾರ್ಮಿಕರ ಸಂಖ್ಯೆ	ಒಟ್ಟು ಪೌರಕಾರ್ಮಿಕರ ಸಂಖ್ಯೆ	ಖಾಲಿ ಇರುವ ಖಾಯಂ ಪೌರಕಾರ್ಮಿಕರ ಹುದ್ದೆಗಳ ಸಂಖ್ಯೆ	ಖಾಲಿ ಇರುವ ನೇರ ಪಾವತಿ ಪೌರಕಾರ್ಮಿಕರ ಹುದ್ದೆಗಳ ಸಂಖ್ಯೆ
01	ನಗರಸಭೆ ಗದಗ ಬೆಟಗೇರಿ	209474	308	154	154	118	0	118	36	154

ಖಾಲಿ ಇರುವ ನೇರಪಾವತಿ ಪೌರಕಾರ್ಮಿಕರ ಹುದ್ದೆಗಳ ವಿವರ.

ಕ್ರ.ಸಂ	ನಗರ ಸ್ಥಳೀಯ ಸಂಸ್ಥೆ ಹೆಸರು	ಹಂಚಿಕೆ ಮಾಡಲಾದ ಖಾಲಿ ಹುದ್ದೆಗಳ ಸಂಖ್ಯೆ		
		ನೇರಪಾವತಿ ಪೌರಕಾರ್ಮಿಕರ ಸಂಖ್ಯೆ	ಮ್ಯಾನ್ಯುವಲ್ ಸ್ಕ್ಯಾವೆಂಜರ್ಸ ಅಧಿನಿಯಮದಡಿ (ಶೇ.10 ರಷ್ಟು ಕಾಯ್ದೆರಿಸಿದ ಖಾಲಿ ಹುದ್ದೆಗಳ ಸಂಖ್ಯೆ)	ಒಟ್ಟು ಖಾಲಿ ಇರುವ ನೇರನೇಮಕಾತಿ ಹುದ್ದೆಗಳ ಸಂಖ್ಯೆ
1	ನಗರಸಭೆ ಗದಗ ಬೆಟಗೇರಿ	154	15	154

ಕ್ರ.ಸಂ.	ಹುದ್ದೆಯ ಹೆಸರು	ಒಟ್ಟು ಹುದ್ದೆಗಳು	ಕನಿಷ್ಠ ವಿದ್ಯಾರ್ಹತೆ
01	ಪೌರಕಾರ್ಮಿಕರು	154	1. ವಿದ್ಯಾರ್ಹತೆ ಅನ್ವಯಿಸುವುದಿಲ್ಲ. 2. ಕನ್ನಡ ಭಾಷೆಯಲ್ಲಿ ಮಾತನಾಡಲು ಬರಬೇಕು. 3. ಅರ್ಜಿ ಸಲ್ಲಿಸಲು ಸರ್ಕಾರದ ಅಧಿಸೂಚನೆ ಹೊರಡಿಸಿದ ದಿನಾಂಕಕ್ಕೆ 18 ವರ್ಷ ಪೂರ್ಣಗೊಂಡಿರಬೇಕು.

ಅರ್ಜಿ ಶುಲ್ಕ:

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಮಹಿಳಾ ಅಭ್ಯರ್ಥಿಗಳು	ರೂ.100.00
ಸಾಮಾನ್ಯ ವರ್ಗ, 2ಎ, 2ಬಿ, 3ಎ, 3ಬಿ ವರ್ಗಕ್ಕೆ	ರೂ.200.00

ಅರ್ಜಿ ಶುಲ್ಕವನ್ನು ಡಿ.ಡಿ. ಮೂಲಕ ಅರ್ಜಿಯೊಂದಿಗೆ ಸಲ್ಲಿಸತಕ್ಕದ್ದು (ಡಿಡಿ ಯನ್ನು ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಾರ್ಯಾಲಯ, ಗದಗ ಹೆಸರಿಗೆ ತೆಗೆಯುವುದು) ಅರ್ಜಿ ಶುಲ್ಕವನ್ನು ಸಲ್ಲಿಸಿದೆ ಇರುವ ಅರ್ಜಿಗಳನ್ನು ಹಾಗೂ ಅರ್ಜಿಯಲ್ಲಿ ನಮೂದಿಸಿದ ಪೂರ್ಣ ದಾಖಲೆಗಳನ್ನು ಸಲ್ಲಿಸಿದೇ ಇರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ವಯೋಮಿತಿ/ವಿದ್ಯಾರ್ಹತೆ

1. ಕನಿಷ್ಠ 18 ವರ್ಷ ಗರಿಷ್ಠ ವಯೋಮಿತಿ 50 ವರ್ಷದೊಳಗಿರಬೇಕು.
2. ವಿದ್ಯಾರ್ಹತೆ ಅನ್ವಯಿಸುವುದಿಲ್ಲ. ಆದರೆ ಕನ್ನಡ ಭಾಷೆಯಲ್ಲಿ ಮಾತನಾಡಲು ಬರಬೇಕು.

ಪರಿಗಣನೆಯ ಅಂಶಗಳು

1. ಅರ್ಜಿದಾರರು ಭಾರತೀಯ ನಾಗರೀಕನಾಗಿರತಕ್ಕದ್ದು.
2. ಜಿಲ್ಲೆಯ ಸ್ಥಳೀಯ ಸಂಸ್ಥೆಗಳಲ್ಲಿ ಈ ಹಿಂದೆ ಹೊರಗುತ್ತಿಗೆ ದಿನಗೂಲಿ/ ಗುತ್ತಿಗೆ ಆಧಾರದ ಮೇಲೆ ಕನಿಷ್ಠ ಒಂದು ವರ್ಷ ಪೌರಕಾರ್ಮಿಕ, ಲೋಡರ್ಸ್, ಯುಜಿಡಿ/ ಹೆಲ್ಪರ್ಸ್, ಕ್ಲೀನರ್ಸ್ ಹಾಗೂ ಹೆಲ್ಪರ್ಸ್ ಗಳಾಗಿ ಕಾರ್ಯನಿರ್ವಹಿಸುತ್ತಿರುವ /ಕಾರ್ಯನಿರ್ವಹಿಸಿದ ಅಭ್ಯರ್ಥಿಗಳಿಗೆ ಪ್ರಥಮ ಆದ್ಯತೆ ನೀಡುವುದು. (ಕಾರ್ಯ ನಿರ್ವಹಿಸಿದ ಅವಧಿಗೆ ESI /PF ವೇತನ ಪಾವತಿಸಿರುವ ಬ್ಯಾಂಕ ಪಾಸ್ ಬುಕ್ ಅಥವಾ ಹಾಜರಾತಿ ದಾಖಲೆಗಳನ್ನು ಪಡೆಯುವುದು)

3. ಜಿಲ್ಲೆಯ ಸ್ಥಳೀಯ ಸಂಸ್ಥೆಗಳಲ್ಲಿ ಹೊರಗುತ್ತಿಗೆ/ ದಿನಗೂಲಿ/ ಗುತ್ತಿಗೆ ಆಧಾರದ ಮೇಲೆ ಪೌರಕಾರ್ಮಿಕರಾಗಿ ಕಾರ್ಯನಿರ್ವಹಿಸುವಾಗ ಕೋವಿಡ್-19 ರ ಸಾಂಕ್ರಾಮಿಕ ರೋಗಕ್ಕೆ ತುತ್ತಾಗಿ ಅಥವಾ ಇತರೆ ಕಾರಣಗಳಿಂದ ಮರಣ ಹೊಂದಿದ ಪೌರಕಾರ್ಮಿಕರ ಕುಟುಂಬದ ಒಬ್ಬ ಸದಸ್ಯರನ್ನು ನೇರಪಾವತಿಯಡಿ ನೇಮಕ ಮಾಡಿಕೊಳ್ಳಲು ಪರಿಗಣಿಸುವುದು.
4. ಜಿಲ್ಲೆಯ ಸ್ಥಳೀಯ ಸಂಸ್ಥೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕನಿಷ್ಠ ಒಂದು ವರ್ಷ ಲೋಡರ್ಸ/ ಯುಜಿಡಿ ಹೆಲ್ಪರ್ಸ್, ಕ್ಲೀನರ್ಸ್, ಹೆಲ್ಪರ್ಸ್ ಮತ್ತು ತ್ಯಾಜ್ಯ ಸಂಸ್ಕರಣ ಘಟಕ, ಸಾರ್ವಜನಿಕ ಶೌಚಾಲಯ, ಶೂನ್ಯ ತ್ಯಾಜ್ಯ ನಿರ್ವಹಣೆ ಘಟಕದಲ್ಲಿ ಕಾರ್ಯನಿರ್ವಹಿಸಿದ ಅನುಭವವುಳ್ಳ ಸ್ಥಳೀಯ ಸ್ವಚ್ಛತಾ ಕೆಲಸಗಾರರನ್ನು ಪರಿಗಣಿಸುವುದು. (ಕಾರ್ಯನಿರ್ವಹಿಸಿದ ಅವಧಿಗೆ ESI/PF/ ವೇತನ ಪಾವತಿಸಿರುವ ಬ್ಯಾಂಕ ಪಾಸ್ ಬುಕ್ ಅಥವಾ ಹಾಜರಾತಿ ದಾಖಲೆಗಳನ್ನು ಪಡೆಯುವುದು)
5. ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಅಧಿನಿಯಮದಡಿ ಗುರುತಿಸಲ್ಪಟ್ಟ ಸಂತ್ರಸ್ತರುಗಳಿಗೆ ಅಥವಾ ಅವರ ಕುಟುಂಬದ ಸದಸ್ಯರಿಗೆ (ಗಂಡ, ಹೆಂಡತಿ, ಮಗ ಮಗಳು) ಒಟ್ಟು ಖಾಲಿ ಇರುವ ಹುದ್ದೆಗಳ ಪೈಕಿ ಶೇ.10 ರಷ್ಟು ಹುದ್ದೆಗಳನ್ನು ಮೀಸಲಿಡುವುದು. ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದೇ ಇದ್ದಲ್ಲಿ ಸದರಿ ಹುದ್ದೆಗಳನ್ನು ಇತರೆ ವರ್ಗಗಳಿಂದ ಭರ್ತಿ ಮಾಡಲು ಕ್ರಮವಹಿಸುವುದು.
6. ಮೇಲ್ಕಾಣಿಸಿದ ಕ್ರಮ ಸಂಖ್ಯೆ 1 ರಿಂದ 4 ರಲ್ಲಿ ತಿಳಿಸಿರುವ ವರ್ಗದವರಿಗೆ ಆಧ್ಯತೆ ನೀಡಿದ ನಂತರ ಬಾಕಿ ಉಳಿಯುವ ಖಾಲಿ ಹುದ್ದೆಗಳನ್ನು ಇತರೆ ವರ್ಗಗಳಿಂದ ಭರ್ತಿ ಮಾಡಬಹುದಾಗಿದೆ.
7. ನೇರ ಪಾವತಿಯಡಿ ನೇಮಕಾತಿ ಮಾಡಿಕೊಳ್ಳುವ ಪದ್ಧತಿ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರೆ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) ಅಧಿನಿಯಮದಲ್ಲಿ ಉಲ್ಲೇಖಿಸಿರುವುದಿಲ್ಲ. ಆದ ಕಾರಣ ನೇರಪಾವತಿಯಡಿ ನೇಮಕಾತಿ ಪ್ರಕ್ರಿಯೆಯು ಸದರಿ ಅಧಿನಿಯಮಕ್ಕೆ ಒಳಪಟ್ಟಿರುವುದಿಲ್ಲ ಮತ್ತು ಮೀಸಲಾತಿ ಅನ್ವಯಿಸುವುದಿಲ್ಲ (ಸಮಾಜ ಕಲ್ಯಾಣ ಇಲಾಖೆ ಇವರು ನೀಡಿರುವ ಅಭಿಪ್ರಾಯ ಅನುಸರಿಸಿ) (1 ರಿಂದ 4 ರಲ್ಲಿ ತಿಳಿಸಿರುವಂತಹ ಅಭ್ಯರ್ಥಿಗಳು ಸಂಬಂಧಿಸಿದ ಸಕ್ಷಮ ಪ್ರಾಧಿಕಾರದ ದೃಢೀಕರಣ ಪಡೆದಿರಬೇಕು)

ನೇಮಕಾತಿ ಷರತ್ತುಗಳು:

1. ಕಾರ್ಮಿಕ ಇಲಾಖೆಯ ಕನಿಷ್ಠ ವೇತನ ಕಾಯ್ದೆಯನ್ವಯ ವೇತನ ನಿಗದಿಪಡಿಸುವುದು ಹಾಗೂ ಕಾರ್ಮಿಕ ಇಲಾಖೆಯು ಕಾಲಕಾಲಕ್ಕೆ ಪರಿಷ್ಕರಿಸುವ ವೇತನವನ್ನು ಮತ್ತು ಪಿ.ಎಫ್ ಮತ್ತು ಇ.ಎಸ್.ಐ ಸೌಲಭ್ಯವನ್ನು ಕಲ್ಪಿಸುವುದು.
2. ನೇರಪಾವತಿಯಡಿ ಆಯ್ಕೆಗೊಂಡ ಪೌರಕಾರ್ಮಿಕರು ತಾತ್ಕಾಲಿಕವಾಗಿ ನೇಮಕವಾಗಿದ್ದು, ಖಾಯಂ ನೌಕರರಿಗೆ ನೀಡುವಂತಹ ಇತರೇ ಯಾವುದೇ ಸೌಲಭ್ಯಗಳಿಗೆ ಅರ್ಹರಿರುವುದಿಲ್ಲ. ಮತ್ತು ವ್ಯಕ್ತಿಗತವಾಗಿ ಅಥವಾ ಸಂಘಗಳನ್ನು ಸ್ಥಾಪಿಸಿಕೊಂಡು ಖಾಯಂ ಮಾಡುವಂತೆ ಒತ್ತಾಯಿಸುವಂತಿಲ್ಲ. ಹಾಗೂ ಖಾಯಂ ಮಾಡುವಂತೆ ಯಾವುದೇ ನ್ಯಾಯಾಲಯದ ಮೊರೆ ಹೋಗುವುದಕ್ಕೆ ಅಸ್ಪದವಿರುವುದಿಲ್ಲ. (ಈ ಕುರಿತು ಆಯ್ಕೆಗೊಂಡ ಅಭ್ಯರ್ಥಿಗಳಿಂದ Notary Affidavit ಕಡ್ಡಾಯವಾಗಿ ಪಡೆಯತಕ್ಕದ್ದು)
3. ನೇರಪಾವತಿಗೆ ಆಯ್ಕೆಯಾಗುವವರು ಆರೋಗ್ಯವಂತರಾಗಿರಬೇಕು ಯಾವುದೇ ಕಾಯಿಲೆಗಳಿಂದ ಬಳಲುತ್ತಿರುವವರಾಗಿರಬಾರದು ಈ ಕುರಿತು ವೈದ್ಯಾಧಿಕಾರಿಗಳಿಂದ ವೈದ್ಯಕೀಯ ದೃಢೀಕರಣ ಪತ್ರ ಪಡೆಯತಕ್ಕದ್ದು.
4. ನೇರ ಪಾವತಿಯಡಿ ಆಯ್ಕೆ ಹೊಂದಿರುವವರು ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ಮೃತರಾದಲ್ಲಿ ಅನುಕಂಪ ನೇಮಕಾತಿ, ಪಿಂಚಣಿ, ಉಪದಾನ, ಇತ್ಯಾದಿ ಯಾವುದೇ ಸೇವಾ ಸೌಲಭ್ಯಗಳಿಗೆ ಅರ್ಹರಿರುವುದಿಲ್ಲ.
5. ನೇರಪಾವತಿಯಡಿ ಆಯ್ಕೆ ಹೊಂದಿರುವ ಪೌರಕಾರ್ಮಿಕರು, ಸ್ವಚ್ಛತಾ ಕೆಲಸವನ್ನೇ ನಿರ್ವಹಿಸಬೇಕು ಅದಲ್ಲದೇ ಇತರೆ ಯಾವುದೇ ಕೆಲಸಕ್ಕೆ ಅಥವಾ ಕಛೇರಿ ಕೆಲಸಗಳಿಗೆ ನಿರ್ವಹಿಸುವಂತಿಲ್ಲ/ ನಿಯೋಜಿಸುವಂತಿಲ್ಲ.
6. ನೇರಪಾವತಿಯಡಿ ಆಯ್ಕೆಗೊಂಡವರುಗಳ ಹೊರತು ಸದರಿಯವರ ಹೆಸರಿನಲ್ಲಿ ಯಾವುದೇ ಸಂದರ್ಭದಲ್ಲಿಯೂ ಬೇರೊಬ್ಬರು ಕರ್ತವ್ಯ ನಿರ್ವಹಿಸುವಂತಿಲ್ಲ.

7. ನೇರಪಾವತಿಯಡಿ ಆಯ್ಕೆಗೊಂಡವರು ಕರ್ತವ್ಯ ನಿರ್ವಹಣೆಯಲ್ಲಿ ವಿಫಲರಾದಲ್ಲಿ ಅಥವಾ ಕಛೇರಿ ಮುಖ್ಯಸ್ಥರು ನೀಡುವ ಸೂಚನೆ ಮತ್ತು ಸಲಹೆಗಳನ್ನು ಪಾಲಿಸದೇ ಇದ್ದಲ್ಲಿ ಸಂಬಂಧಿಸಿದ ಪೌರಾಯುಕ್ತರು/ಮುಖ್ಯಾಧಿಕಾರಿಗಳು ಯಾವುದೇ ಮುನ್ಸೂಚನೆ ನೀಡದೇ ಸದರಿಯವರುಗಳನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಲು ಕ್ರಮ ಕೈಗೊಳ್ಳುವುದು.
8. ನೇರಪಾವತಿಯಡಿ ಆಯ್ಕೆಗೊಂಡಿರುವ ನೌಕರರು ಸರ್ಕಾರದಿಂದ /ನಿರ್ದೇಶನಾಲಯದಿಂದ ಕಾಲಕಾಲಕ್ಕೆ ಹೊರಡಿಸುವ ಆದೇಶ/ ಸುತ್ತೋಲೆಗಳಿಗೆ ಬದ್ಧರಾಗಿರತಕ್ಕದ್ದು. (ಈ ಕುರಿತು ಆಯ್ಕೆಗೊಂಡ ಅಭ್ಯರ್ಥಿಗಳಿಂದ Notary Affidavit ಕಡ್ಡಾಯವಾಗಿ ಪಡೆಯತಕ್ಕದ್ದು.)
9. ಅರ್ಜಿ ಸಲ್ಲಿಸಿರುವ ನೇರಪಾವತಿ ಪೌರಕಾರ್ಮಿಕರ ಗರಿಷ್ಠ ವಯೋಮಿತಿ ಕನಿಷ್ಠ 18 ವರ್ಷ ಗರಿಷ್ಠ 50 ವರ್ಷಗಳು ಮೀರಕೂಡದು ಅಭ್ಯರ್ಥಿಯ ವಯಸ್ಸನ್ನು ಶೈಕ್ಷಣಿಕ ವಿದ್ಯಾರ್ಹತೆ/ ದಾಖಲಾತಿಗಳು /ಆಧಾರ ಕಾರ್ಡ/ಪಡಿತರ ಚೀಟಿ/ಮತದಾರರ ಗುರುತಿನ ಚೀಟಿ (ಎಪಿಕ್) ದಾಖಲಾತಿಗಳನ್ನು ಆಧರಿಸಿ ನಿರ್ಧರಿಸಲಾಗುವುದು.
10. ಅರ್ಜಿಯಲ್ಲಿ ತಪ್ಪು/ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆದಲ್ಲಿ, ಅಂತಹ ಅಭ್ಯರ್ಥಿಗಳ ನೇಮಕಾತಿಯನ್ನು ವಜಾಗೊಳಿಸುವುದಲ್ಲದೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.
11. ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೇ ದಿನವು ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕವಾಗುವುದು.
12. ಅಭ್ಯರ್ಥಿಗಳು ನಿಗಧಿತ ನಮೂನೆಯಲ್ಲಿ ಅರ್ಜಿಗಳನ್ನು ಭರ್ತಿ ಮಾಡಿ ಅಧ್ಯಕ್ಷರು ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು ಗದಗ ರವರ ಹೆಸರಿನಲ್ಲಿ ಪೌರಾಯುಕ್ತರು/ಮುಖ್ಯಾಧಿಕಾರಿಗಳು ಆಯಾ ನಗರ ಸ್ಥಳೀಯ ಸಂಸ್ಥೆಗಳ ಮೂಲಕ ಸಲ್ಲಿಸುವುದು ನೇರವಾಗಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
13. ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವುದು.
14. ಅಂತಿಮವಾಗಿ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಮುನ್ನ ಯಾವುದೇ ಹಂತದಲ್ಲಿ ಯಾವುದೇ ಕಾರಣ/ಮಾಹಿತಿ ನೀಡದೇ ಈ ನೇಮಕಾತಿ ಪ್ರಕ್ರಿಯೆಯನ್ನು ಮುಂದೂಡುವ ಅಥವಾ ರದ್ದುಪಡಿಸುವ ಅಥವಾ ವಿಧಿಸಲಾಗಿರುವ ಯಾವುದೇ ಷರತ್ತನ್ನು ಸಡಿಲಗೊಳಿಸುವ ಅಥವಾ ಹೆಚ್ಚುವರಿ ಷರತ್ತನ್ನು ವಿಧಿಸುವ, ತುಂಬಲಾಗುವ ಹುದ್ದೆಗಳ ಸಂಖ್ಯೆಯನ್ನು ಬದಲಾಯಿಸುವ ನಿರ್ಣಯಿಸುವ ಅಧಿಕಾರವನ್ನು ಅಧ್ಯಕ್ಷರು ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿ, ಗದಗ ಜಿಲ್ಲೆ ರವರು ಕಾಯ್ದಿರಿಸಿಕೊಂಡಿರುತ್ತಾರೆ.
15. ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆಪಟ್ಟಿಯಲ್ಲಿ ಸೇರ್ಪಡೆಯಾಗಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿ ಹಕ್ಕು ದೊರೆಯುವುದಿಲ್ಲ.
16. ನಗರಸಭೆಗಳಲ್ಲಿ ಹಾಲಿ ಹೊರಗುತ್ತಿಗೆ/ದಿನಗೂಲಿ ಗುತ್ತಿಗೆ ಆಧಾರದ ಮೇಲೆ, ಕನಿಷ್ಠ ಒಂದು ವರ್ಷ ಪೌರಕಾರ್ಮಿಕ/ಲೋಡರ್ಸ್, ಯುಜಿಡಿ ಹೆಲ್ಪರ್ಸ್, ಕ್ಲೀನರ್ಸ್ ಹಾಗೂ ಹೆಲ್ಪರ್ಸ್ ಗಳಾಗಿ ಕಾರ್ಯ ನಿರ್ವಹಿಸುತ್ತಿರುವ/ಕಾರ್ಯ ನಿರ್ವಹಿಸಿದ ಅಭ್ಯರ್ಥಿಗಳಿಗೆ ಜೇಷ್ಠತೆಯನ್ನು ಸೇವಾ ಅವಧಿಯ ಜೇಷ್ಠತೆಯ ಮೇರೆಗೆ ಪರಿಗಣಿಸಲಾಗುವುದು. ಒಂದು ವೇಳೆ 02 ಮತ್ತು ಅದಕ್ಕಿಂತ ಹೆಚ್ಚು ಅಭ್ಯರ್ಥಿಗಳ ಸೇವಾ ಅವಧಿ ಒಂದೇ ಇದ್ದ ಪಕ್ಷದಲ್ಲಿ ಅಂತಹ ಅಭ್ಯರ್ಥಿಗಳ ಜೇಷ್ಠತೆಯನ್ನು ಅವರ ವಯಸ್ಸಿಗೆ ಅನುಗುಣವಾಗಿ ಅಂದರೆ ಹೆಚ್ಚು ವಯಸ್ಕರನ್ನು ಕಡಿಮೆ ವಯಸ್ಕರಿಗಿಂತ ಮೇಲೆ ಪರಿಗಣಿಸಲಾಗುವುದು. ವಯಸ್ಸು ಮತ್ತು ಸಲ್ಲಿಸಿರುವ ಸೇವೆ ಒಂದೇ ತರನಾಗಿದ್ದರೆ, ಲಾಟರಿ ಮೂಲಕ ಪರಿಗಣಿಸಲಾಗುವುದು.
17. ಮೀಸಲಾತಿ ಅನ್ವಯಿಸುವುದಿಲ್ಲ.
18. ಯಾವುದೇ ಕ್ರಿಮಿನಲ್ ಪ್ರಕರಣದಲ್ಲಿ ಭಾಗಿಯಾಗಿರಬಾರದು.
19. ಈಗಾಗಲೇ ಯಾವುದೇ ಕಚೇರಿಯಲ್ಲಿ ಶಿಸ್ತು ಕ್ರಮಕ್ಕೆ ಒಳಗಾಗಿ ಸೇವೆಯಿಂದ ವಜಾಗೊಂಡಿರಬಾರದು.
20. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾ ಆಡಳಿತ ಭವನ, ಗದಗ ಮತ್ತು ನಗರಸಭೆ ಗದಗ-ಬೆಟಗೇರಿ ಕಛೇರಿಯನ್ನು ಸಂಪರ್ಕಿಸತಕ್ಕದ್ದು.

ಪೌರಾಯುಕ್ತರು/ಮುಖ್ಯಾಧಿಕಾರಿಗಳ ಕರ್ತವ್ಯಗಳು

ಅರ್ಜಿ ಸ್ವೀಕರಿಸಲು ನಿಗದಿಪಡಿಸಿದ ಸಮಯ ಮುಕ್ತಾಯವಾದ ದಿನದಂದು ಸಂಜೆ 6-00 ಗಂಟೆಯೊಳಗೆ ಸ್ವೀಕೃತಿಯಾದ ಅರ್ಜಿಗಳ ಸಂಖ್ಯೆಯನ್ನು ಈ ಕಛೇರಿಗೆ ಲಿಖಿತವಾಗಿ ಸಲ್ಲಿಸುವುದು.

1. ಅವಧಿ ಮೀರಿದ ನಂತರದಲ್ಲಿ ಯಾವುದೇ ಅರ್ಜಿಗಳನ್ನು ಸ್ವೀಕರಿಸತಕ್ಕದ್ದಲ್ಲ.
2. ಸ್ವೀಕೃತಿಯಾದ ಅರ್ಜಿಗಳನ್ನು ಪರಿಶೀಲಿಸಿ ಸದರಿ ಗುತ್ತಿಗೆ ಅರ್ಹತೆಯನ್ನು (ನೇರಪಾವತಿಗೆ) ಹೊಂದಿರುವ ಬಗ್ಗೆ ಖಚಿತಪಡಿಸಿಕೊಂಡು ಸೂಕ್ತ ಶಿಫಾರಸ್ಸಿನೊಂದಿಗೆ ಹಾಗೂ ದಾಖಲೆಗಳೊಂದಿಗೆ ಅಧ್ಯಕ್ಷರು ಆಯ್ಕೆ ಮತ್ತು ನೇರನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು ಗದಗ ರವರಿಗೆ ಸಲ್ಲಿಸುವುದು.
3. ಪರಿಶೀಲಿಸಿದ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಅವಧಿ ಮುಕ್ತಾಯವಾದ ಮೂರು ದಿನಗಳೂಳಗಾಗಿ ಈ ಕಛೇರಿಗೆ ಸಲ್ಲಿಸುವುದು.
4. ಅಧಿಸೂಚನೆಯಲ್ಲಿ ಲಗತ್ತಿಸಿರುವ ಅರ್ಜಿ ನಮೂನೆಯನ್ನು ಅಭ್ಯರ್ಥಿಗಳಿಗೆ ದ್ವಿ ಪ್ರತಿಯಲ್ಲಿ ನೀಡುವುದು.

ವಿಶೇಷ ಷರತ್ತುಗಳು:

1. ಈ ಸಾರ್ವಜನಿಕ ಪ್ರಕಟಣೆಯು ನೇಮಕಾತಿ ಆದೇಶವಾಗಿರುವುದಿಲ್ಲ.
2. ಶುಲ್ಕ ಭರಿಸಲು ಅರ್ಜಿ ಸಲ್ಲಿಸಿದ ಮಾತ್ರಕ್ಕೆ ಅರ್ಭರ್ಥಿಗಳು ನೇರಪಾವತಿ ಆಯ್ಕೆಯಾಗಿರುವುದಾಗಿ ಭಾವಿಸತಕ್ಕದಲ್ಲ.
3. ಆಯ್ಕೆ ಸಂದರ್ಭದಲ್ಲಿ ಹೆಚ್ಚಿನ ದಾಖಲೆಗಳು ಅವಶ್ಯಕ ಎಂದು ಕಂಡುಬಂದಲ್ಲಿ ಆಯ್ಕೆ ಸಮಿತಿಗೆ ದಾಖಲೆಗಳನ್ನು ಪೂರೈಸತಕ್ಕದ್ದು.
4. ಪೌರಕಾರ್ಮಿಕರ ನೇರಪಾವತಿ ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇರಪಾವತಿ ಪೌರಕಾರ್ಮಿಕರ ನೇಮಕಾತಿ ಆಯ್ಕೆ ಸಮಿತಿ ಅಧ್ಯಕ್ಷರಾದ ಜಿಲ್ಲಾಧಿಕಾರಿಗಳು, ಗದಗ ಜಿಲ್ಲೆ ಗದಗ ರವರು ಕಾಯ್ದಿರಿಸಿಕೊಂಡಿರುತ್ತಾರೆ.

ಸದರಿ ಅಧಿಸೂಚನೆಯಲ್ಲಿ ಯಾವುದಾದರೂ ಹೆಚ್ಚುವರಿ ಅಂಶಗಳನ್ನು ಸೇರಿಸುವ ಮತ್ತು ತೆಗೆದುಹಾಕುವ ಅಧಿಕಾರವನ್ನು ಅಧ್ಯಕ್ಷರು ಆಯ್ಕೆ ಮತ್ತು ನೇರನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು ಗದಗ ಇವರು ಕಾಯ್ದಿರಿಸಿಕೊಂಡಿರುತ್ತಾರೆ.

(ಸಿ. ಎನ್. ಶ್ರೀಧರ, ಭಾ.ಆ.ಸೇ)
ಅಧ್ಯಕ್ಷರು
ಆಯ್ಕೆ ಮತ್ತು ನೇರನೇಮಕಾತಿ ಪ್ರಾಧಿಕಾರ
ಹಾಗೂ ಜಿಲ್ಲಾಧಿಕಾರಿ. ಗದಗ ಜಿಲ್ಲೆ

ಪ್ರತಿ ಮಾಹಿತಿಗಾಗಿ

1. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.

ಪ್ರತಿ ಸೂಕ್ತ ಕ್ರಮಕ್ಕಾಗಿ

1. ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಗದಗ ರವರ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಚುರ ಪಡಿಸಲು ಸೂಚಿಸಿದೆ.
2. ಪೌರಾಯುಕ್ತರು, ನಗರಸಭೆ ಗದಗ-ಬೆಟಗೇರಿ ರವರಿಗೆ
3. ಮುಖ್ಯಾಧಿಕಾರಿಗಳು, ಪುರಸಭೆ ಗಜೇಂದ್ರಗಡ, ಲಕ್ಷ್ಮೇಶ್ವರ, ಮುಂಡರಗಿ, ನರಗುಂದ, ರೋಣ
4. ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯತ ಮುಳಗುಂದ, ನರೇಗಲ್ಲ, ಶಿರಹಟ್ಟಿ
   2/-ಸದರಿ ಅಧಿಸೂಚನೆಯನ್ನು ಕಛೇರಿ ವೆಬ್‌ಸೈಟ್‌ನಲ್ಲಿ ಮತ್ತು ಸೂಚನಾ ಫಲಕದಲ್ಲಿ ಪ್ರಚುರ ಪಡಿಸಲು ಸೂಚಿಸಿದೆ.
5. ಈ ಕಾರ್ಯಾಲಯದ ಸೂಚನಾ ಫಲಕಕ್ಕೆ.
6. ಕಛೇರಿ ಪ್ರತಿ,